ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 30/10/2019

# ಅನರ್ಹರು ಬಿಜೆಪಿ ಸೇರುವುದು ಸತ್ಯ

30/10

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ನಾವು ಬಿಜೆಪಿ ಸೇರುವುದು ಎಲ್ಲರಿಗೂ ಗೊತ್ತಿದೆ. ಅದು ಈಗಾಗಲೇ ಲೋಕಾರೂಢಿ ಸತ್ಯ. ಎಚ್. ವಿಶ್ವನಾಥ ಸತ್ಯವನ್ನೇ ಹೇಳಿದ್ದಾರೆ ಎಂದು ಅನರ್ಹ ಶಾಸಕ ಎಂಟಿಬಿ ನಾಗರಾಜ್ ವಿಶ್ವನಾಥ್ ಹೇಳಿಕೆಯನ್ನು ಸಮರ್ಥಿಸಿ ಕೊಂಡಿದ್ದಾರೆ.

ಸಿಎಂ ಬಿ.ಎಸ್.ಯಡಿಯೂರಪ್ಪ ಅವರನ್ನು ಗೃಹ ಕಚೇರಿ ಕೃಷ್ಣಾದಲ್ಲಿ ಭೇಟಿ ಮಾಡಿದ ಬಳಿಕ ಸುದ್ದಿಗಾರ ರೊಂದಿಗೆ ಮಾತನಾಡಿ, ಶರತ್ ಬಚ್ಚೇಗೌಡ ಅವರು ಹೊಸಕೋಟೆ ಕ್ಷೇತ್ರದಲ್ಲಿ ಪಕ್ಷೇತರರಾಗಿ ಪ್ರಚಾರ ಆರಂಭಿಸಿದ್ದಾರೆ. ಅವರನ್ನು ಕಣದಿಂದ ಹಿಂದೆ ಸರಿಯುವಂತೆ ಸೂಚಿಸಲು ಮುಖ್ಯಮಂತ್ರಿ ಬಳಿ ಎಂಟಿಬಿ ನಾಗರಾಜ್ ಮನವಿ ಮಾಡಿದ್ದಾರೆ ಎನ್ನಲಾಗಿದೆ.

ಈ ಕುರಿತು ಮಾತನಾಡಿದ ಅವರು, ಹೊಸಕೋಟೆ ಕ್ಷೇತ್ರದಲ್ಲಿ ಶರತ್ ಬಚ್ಚೇಗೌಡ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವುದಾಗಿ ಹೇಳಿಕೊಂಡು ಪ್ರಚಾರ ಆರಂಭಿಸಿದ್ದಾರೆ. ಈಗಾಗಲೇ ಕ್ಷೇತ್ರದಲ್ಲಿ ಮನೆಮನೆ ಪ್ರಚಾರ ಮಾಡುತ್ತಿದ್ದಾರೆ. ಪ್ರಚಾರ ಮಾಡಿಕೊಳ್ಳಲಿ, ಅದಕ್ಕೂ ನನಗೂ ಸಂಬಂಧ ಇಲ್ಲ. ಅನರ್ಹತೆ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ತೀರ್ಪು ಬಂದ ಮೇಲೆ ನಾನು. ಮುಂದಿನ ನಿರ್ಧಾರ ತೆಗೆದುಕೊಳ್ಳುತ್ತೇನೆ ಎಂದರು.

## ಕಾಂಗ್ರೆಸ್‌ನಲ್ಲಿ ಮೂರು ಗುಂಪು

ಕಾಂಗ್ರೆಸ್‌ನಲ್ಲಿ ಈಗ ಮೂರು ಗುಂಪುಗಳಾಗಿವೆ. ಮೂಲ ಕಾಂಗ್ರೆಸ್ಸಿಗರು, ಸಿದ್ದರಾಮಯ್ಯ ಗುಂಪು ಹಾಗೂ ಪರಮೇಶ್ವರ್ ಗುಂಪು ಇದೆ. ಈ ರೀತಿಯ ಗುಂಪುಗಾರಿಕೆ ಮಾಡಿಯೇ ಲೋಕಸಭೆಯಲ್ಲಿ ಒಂದೇ ಒಂದು ಸ್ಥಾನ ಗೆದ್ದಿದ್ದಾರೆ. ಕಾಂಗ್ರೆಸ್ ಒಂದು ಸ್ಥಾನ ಗೆದ್ದಿದ್ದು, ದೇಶ, ರಾಜ್ಯದಲ್ಲಿ ಕಾಂಗ್ರೆಸ್ ಬದಲಾಗಿದೆ. ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾಗಿದೆ. ಕಾಂಗ್ರೆಸ್‌ನಲ್ಲಿ ಗುಂಪುಗಾರಿಕೆ ಹಾಗೂ ನಾಯಕತ್ವದ ಕೊರತೆ ಇದೆ ಎಂದು ಆರೋಪಿಸಿದರು.